ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS**

ಇಲಾಖೆ / ವಿಷಯ : DEPARTMENT / SUBJECT: ರೈತರು – ಎ.ಪಿ.ಎಂ.ಸಿ ಕಾಯ್ದೆ

ಪತ್ರಿಕೆಯ ಹೆಸರು : NAME OF THE NEWS PAPER: ಸಂಯುಕ್ತ ಕರ್ನಾಟಕ ದಿನಾಂಕ : DATE : 26/12/20



ಮಾಜಿ ಪ್ರಧಾನಮಂತ್ರಿಗಳಾದ ದಿವಂಗತ ಅಟಲ್ ಬಿಹಾರಿ ವಾಜಪೇಯಿರವರ ಜನ್ಮದಿನದ ಅಂಗವಾಗಿ ಆಯೋಜಿಸಲಾಗಿದ್ದ ಕಿಸಾನ್ ಸಮ್ಮಾನ್ ಯೋಜನೆ ಕಾರ್ಯಕ್ರಮದಲ್ಲಿ ರೈತರನ್ನು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಸನ್ಮಾನಿಸಿ ಗೌರವಿಸಿದರು. ಈ ಸಂದರ್ಭದಲ್ಲಿ ಉಪ ಮುಖ್ಯಮಂತ್ರಿ ಗೋವಿಂದ ಕಾರಜೋಳ, ಸಚಿವರಾದ ಬಿ.ಸಿ. ಪಾಟೀಲ್, ಎಸ್.ಟಿ. ಸೋಮಶೇಖರ್, ಗೋಪಾಲಯ್ಯ, ಶಾಸಕ ಮುನಿರತ್ನ ಮತ್ತಿತರರಿದ್ದರು.

# ಎಪಿಎಂಸಿ ಕಾಯ್ದೆಗೆ ಸ್ವಾರ್ಥಿಗಳಿಂದ ವಿರೋಧ

26/12/20

ಸಂ.ಕ. ಸಮಾಚಾರ ಬೆಂಗಳೂರು

ಎಪಿಎಂಸಿ ಕಾಯ್ದೆಯನ್ನು ರೈತರ ಒಳಿತಿಗಾಗಿ ಜಾರಿಗೆ ತರಲಾಗಿದೆ. ಆದರೆ, ಕೆಲವು ಸ್ವಾರ್ಥಿಗಳು ಇದನ್ನು ವಿರೋಧಿಸಿ ರೈತರ ದಿಕ್ಕು ತಪ್ಪಿಸುತ್ತಿದ್ದಾರೆ ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಆಕ್ರೋಶ ವ್ಯಕ್ತಪಡಿಸಿದರು.

ಮಾಜಿ ಪ್ರಧಾನಿ ಅಟಲ್ ಬಿಹಾರಿ ವಾಜಪೇಯಿ ಜನ್ಮದಿನದ ಅಂಗವಾಗಿ ಬೆಂಗಳೂರಿನ ಯಶವಂತಪುರದ ಎಪಿಎಂಸಿ ಯಾರ್ಡ್‌ನಲ್ಲಿ ಹಮ್ಮಿಕೊಳ್ಳಲಾಗಿದ್ದ ಕಿಸಾನ್ ಸಮ್ಮಾನ್ ಯೋಜನೆ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಎಪಿಎಂಸಿ ಕಾಯ್ದೆಗೆ ತಿದ್ದುಪಡಿ ತರುವ ಮೂಲಕ ರೈತ ಎಲ್ಲಿ ಬೇಕಾದರೂ ತಾನು ಬೆಳೆದ ಬೆಳೆ ಮಾರಾಟ ಮಾಡುವ ಅವಕಾಶ ಪ್ರಧಾನಿ ಮೋದಿ ನೀಡಿದರು. ಆದರೆ, ಇದನ್ನು ಕೆಲ ಸ್ವಾರ್ಥಿಗಳು ವಿರೋಧಿಸುತ್ತಿದ್ದಾರೆ. ಶೇ 99ರಷ್ಟು ರೈತರು ಇದನ್ನು ಸ್ವಾಗತಿಸಿದ್ದಾರೆ. ರೈತರ ಕಣ್ಣೀರನ್ನು ಒರೆಸಿ, ರೈತ ಬೆಳೆದ ಬೆಳೆಗೆ ಬೆಂಬಲ ಬೆಲೆ ನೀಡಿ, ರೈತ ನೆಮ್ಮದಿಯಿಂದ ಗೌರವ, ಸ್ವಾಭಿಮಾನದಿಂದ ಬಾಳಲು ನಾವು ಸಿದ್ಧರಿದ್ದೇವೆ ಎಂಬ ಭರವಸೆ ನೀಡುತ್ತೇನೆ ಎಂದು ತಿಳಿಸಿದರು.

ಕೇಂದ್ರ ಸಚಿವ ಡಿ.ವಿ.ಸದಾನಂದ ಗೌಡ, ಸ್ವಾತಂತ್ರ್ಯದ ಬಳಿಕ ಯಾವ ಉದ್ದೇಶಕ್ಕಾಗಿ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಬಲಿದಾನ ಮಾಡಿದ ದೇಶದ ಹಿರಿಯರ ಮನಸ್ಸಿಗೆ ನೆಮ್ಮದಿ ಕೊಡುವ ರಾಜಕೀಯ ನಡೆದಿಲ್ಲ. ದೇಶ ಮೊದಲು ಎಂಬ ಶಬ್ದಕ್ಕೆ ಅರ್ಥ ಬರುವಂಥ ರೀತಿಯಲ್ಲಿ ದೇಶದಲ್ಲಿ ರಾಜಕಾರಣ ಮಾಡಿಲ್ಲ. ಕಾಂಗ್ರೆಸ್‌ನವರು ದೇಶವನ್ನು ಲೂಟಿ ಮಾಡುವ ಕೆಲಸ ಮಾಡಿದರು ಎಂದು ಕಿಡಿ ಕಾರಿದರು.

ಅನ್ನದಾನತನಿಗೆ ಗೌರವ ಬರುವ ರೀತಿಯಲ್ಲಿ ದೇಶದ ರಾಜನೀತಿ ನಡೆಯಲಿಲ್ಲ. ಅಟಲ್ ಅವರು ಹೊಸ ಪಕ್ಷ ಕಟ್ಟಿದರು. ದೇಶದ ರೈತನಿಗೆ ಎಲ್ಲ ಗೌರವ ಸಿಗುವ ನಿಟ್ಟಿನಲ್ಲಿ ಮೋದಿ ಕೆಲಸ ಮಾಡುತ್ತಿದ್ದಾರೆ. ಅನ್ನದಾತನಿಗೆ ಬೇಕಾದ ಕೆಲಸ ಮಾಡಬೇಕು. ಸ್ವಾತಂತ್ರ್ಯ ಬಂದ ನಂತರವೂ ಆತ ಸ್ವಾಭಿಮಾನದಿಂದ ಬದುಕಲು ಸಾಧ್ಯವಿಲ್ಲ. ರೈತರ ಬೆಳೆದ ಉತ್ಪನ್ನಗಳು ರೈತನದ್ದಾಗಿರಲಿಲ್ಲ. ಅದು ದಲ್ಲಾಳಿಗಳದ್ದಾಗಿತ್ತು. ಅದರಿಂದ ಹೊರಗೆ ತರಬೇಕು ಎಂದು ಕಾನೂನು ತಿದ್ದುಪಡಿ ತರಲಾಗಿದೆ ಎಂದು ವಿವರಿಸಿದರು.

ನಮ್ಮ ರೈತರು ಸ್ವಾಭಿಮಾನಿಯಾಗಿರಬಾರದು ಎಂಬ ದೃಷ್ಟಿಯಿಂದ ವಿರೋಧಿಗಳು ರೈತರ ಮೇಲೆ ಹತೋಟಿ ಮಾಡುವ ಕೆಲಸ ಮಾಡುತ್ತಿದ್ದಾರೆ. ಕೇಂದ್ರ ಸರ್ಕಾರ ನಿಮ್ಮ ಪರವಾಗಿದೆ. ಮೋದಿ ನಿಮ್ಮನ್ನು ಸ್ವಾಭಿಮಾನಿ ರೈತನಾಗಿ ಪರಿವರ್ತನೆ ಮಾಡುವ ಕೆಲಸ ಮಾಡಿದ್ದಾರೆ ಎಂದು ತಿಳಿಸಿದರು.

ಇದೇ ವೇಳೆ ಪ್ರಧಾನ ಮಂತ್ರಿ ಅವರಿಂದ ಪ್ರಧಾನ ಮಂತ್ರಿ ಕಿಸಾನ್ ಸಮ್ಮಾನ್ ಹಾಗೂ ವಿವಿಧ ಯೋಜನೆಗಳ ಲೋಕಾರ್ಪಣೆಯ ವರ್ಚುಯಲ್ ಕಾರ್ಯಕ್ರಮದಲ್ಲೂ ಸಿಎಂ ಭಾಗಿಯಾದರು.